ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಶಿಷ್ಟಾಚಾರದ ಉಲ್ಲಂಘನೆ

3248 - ಶ್ರೀ ವಿ. ಕೃಷ್ಣಪ್ಪ (ದೊಡ್ಡಬಳ್ಳಾಪುರ) : ಸನ್ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಧಾನ ಸಭಾ ಕ್ಷೇತ್ರದಲ್ಲಿ ಸರ್ಕಾರಿ ಸಮಾರಂಭಗಳನ್ನು ವ್ಯವಸ್ಥೆ ಮಾಡಿದಾಗ ಪ್ರೋಟೋಕಾಲ್ ಪ್ರಕಾರ ಆ ಕ್ಷೇತ್ರದ ಶಾಸಕರನ್ನು ಕಡ್ಡಾಯವಾಗಿ ಸಮಾರಂಭದ ಅಧ್ಯಕ್ಷತೆಗೆ ಆಮಂತ್ರಿಸಬೇಕೆಂಬ ನಿಯಮವಿರುವುದು ನಿಜವಲ್ಲವೆ?

ಆ) ಹಾಗಿದ್ದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಏರ್ಪಡಿಸುವ ಎಲ್ಲಾ ಸರ್ಕಾರಿ ಸಮಾರಂಭಗಳಿಗೆ ಕ್ಷೇತ್ರದ ಶಾಸಕರನ್ನು ಕಡೆಗಣಿಸಿ ಬೇರೆಯವರನ್ನು ಆಮಂತ್ರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ನಿಯಮವನ್ನು ಉಲ್ಲಂಘಿಸುತ್ತಿರುವ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ಸರ್ಕಾರವು ತೆಗೆದುಕೊಳ್ಳಲಿರುವ ಕ್ರಮಗಳು ಯಾವುವು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಇಲ್ಲ, ಆದರೆ ಸಮಾರಂಭದಲ್ಲಿ ಪಾಲ್ಗೊಳ್ಳುವಂಥ ಸಂದರ್ಭ ಮತ್ತು ಇತರ ಸನ್ನಿವೇಶಗಳನ್ನು ಆಧರಿಸಿ ಸಚಿವರು/ರಾಜ್ಯ ಸಚಿವರು/ಸಂಸತ್ ಮತ್ತು ರಾಜ್ಯ ವಿಧಾನಸಭಾ/ವಿಧಾನಪರಿಷತ್ ಸದಸ್ಯರುಗಳಿಗೆ ಅಧ್ಯಕ್ಷರು/ಮುಖ್ಯ ಅತಿಥಿ/ವಿಶೇಷ ಆಹ್ವಾನಿತರು ಹೀಗೆ ಸ್ಥಾನಗಳನ್ನು ನೀಡಬೇಕೆಂದು ಸರ್ಕಾರದ ಆದೇಶಗಳಲ್ಲಿ ಸೂಚಿಸಲಾಗಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ವಿಧಾನಸಭಾ ಸದಸ್ಯರ ಆಪ್ತ ಸಹಾಯಕರಿಗೆ ಭತ್ಯೆಗಳನ್ನು ನೀಡುವುದು

3249 - ಶ್ರೀ ವಿ. ಕೃಷ್ಣಪ್ಪ (ದೊಡ್ಡಬಳ್ಳಾಪುರ) ಹಾಗೂ ಶ್ರೀ ಡಿ.ಜಿ. ಶಾಂತನಗೌಡ (ಹೊನ್ನಾಳಿ) : ಸನ್ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಧಾನ ಸಭಾ ಸದಸ್ಯರ ಆಪ್ತ ಸಹಾಯಕರಿಗೆ ಮಾಹೆಯಾನ ಪ್ರವಾಸಭತ್ಯೆ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಹಾಗಿದ್ದಲ್ಲಿ ಎಂದಿನಿಂದ ಮಂಜೂರು ಮಾಡಲಾಗುವುದು?

ಇ) ಇಲ್ಲದಿದ್ದಲ್ಲಿ ಇತರೆ ಸರ್ಕಾರಿ ನೌಕರರುಗಳಿಗೆ ಲಭ್ಯವಿರುವಂತೆ ಪ್ರಯಾಣಭತ್ಯೆ ಹಾಗೂ ದಿನಭತ್ಯೆಯನ್ನು ಮಂಜೂರು ಮಾಡಲಾಗುವುದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ದಿ ಕ್ಲಬ್‌ನವರು ನಿಯಮಗಳನ್ನು ಪಾಲಿಸದೇ ಕಟ್ಟಡ ಕಟ್ಟುತ್ತಿರುವುದು

3252 - ಶ್ರೀ ಸಿ.ಎಂ. ಲಿಂಗಪ್ಪ (ರಾಮನಗರ) : ಸನ್ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಂದ್ರಾ ಲೇಔಟ್ ವಾರ್ಡ್‌ಗೆ ಸೇರಿದ ಮೈಸೂರು ರಸ್ತೆಯಲ್ಲಿರುವ ದಿ ಕ್ಲಬ್ ನವರು ನಿಯಮಗಳನ್ನು ಪಾಲಿಸದೇ ಕಟ್ಟಡ ನಿರ್ಮಿಸುತ್ತಿದ್ದುದರ ಬಗ್ಗೆ ಕ್ರಮ ಕೈಗೊಳ್ಳಲಾಗುವುದೆಂದು ಹಿಂದಿನ ಅಧಿವೇಶನದಲ್ಲಿ ಸರ್ಕಾರ ಉತ್ತರಿಸಿದ್ದುದು ನಿಜವಲ್ಲವೇ?*

ಆ) *ನಿಯಮಗಳನ್ನು ಮೀರಿಯೂ ದಿ ಕ್ಲಬ್‌ನ ಮಾಲೀಕ ತನ್ನ ಹಿಂದಿನ ನಿರ್ಮಾಣ ಕಾರ್ಯಗಳನ್ನು ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ನಿಯಮಗಳನ್ನು ಉಲ್ಲಂಘಿಸಿ ನಿರ್ಮಾಣ ಮಾಡಿರುವ ಕಟ್ಟಡಗಳ ಬಗ್ಗೆ ಸರ್ಕಾರ ಯಾವ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳಲಿದೆ?*

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ಈ ವಿಷಯದ ಬಗ್ಗೆ ನಗರ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಇದ್ದು, ಸದರಿ ಸ್ವತ್ತಿನ ಬಗ್ಗೆ ತಡೆಯಾಜ್ಞೆಯನ್ನು ನೀಡಿರುತ್ತಾರೆ. ದಾವೆಯನ್ನು ದಿನಾಂಕ 5.12.2000ರಂದು ವಿಚಾರಣೆಗಾಗಿ ಮುಂದೂಡಲಾಗಿರುತ್ತದೆ.

ಇ) ನ್ಯಾಯಾಲಯದ ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ತದನಂತರ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಮುಜರಾಯಿ ಇಲಾಖೆಯಿಂದ ಬೀರೂರು ಕ್ಷೇತ್ರಕ್ಕೆ ಹಣ

3254 - ಶ್ರೀ ಕೆ.ಬಿ. ಮಲ್ಲಿಕಾರ್ಜುನ (ಬೀರೂರು) : ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1999-2000 ಮತ್ತು 2000-01ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ದೇವಸ್ಥಾನಗಳ*